# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 05-03-2021 ಪ್ರಶ್ನೆ ಸಂಖ್ಯೆ : 636 (613)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 05-03-2021

ಉತ್ತರಿಸುವ ಸಚಿವರು: ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ವಿಷಯ : ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಸೌಲಭ್ಯಗಳ ಕುರಿತು

(ಅ) ರಾಜ್ಯದ ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಯಾವ ಯಾವ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುತ್ತದೆ ;

(ಆ) ರಾಜ್ಯದ ಹಲವಾರು ಬಸ್ಸು ನಿಲ್ದಾಣಗಳಲ್ಲಿ ಶುದ್ಧ ಕುಡಿಯುವ ನೀರು, ಶುಭ್ರ ಶೌಚಾಲಯದ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ವ್ಯವಸ್ಥೆಗಳನ್ನು ಒದಗಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಸಣ್ಣ ಮಕ್ಕಳನ್ನು ಹೊಂದಿರುವ ತಾಯಂದಿರಿಗೆ ಮಕ್ಕಳ ಹಸಿವನ್ನು ನೀಗಿಸುವ ಸಲುವಾಗಿ ಬಸ್ಸು ನಿಲ್ದಾಣದಲ್ಲಿ ಪ್ರತ್ಯೇಕ ವಿಶ್ರಾಂತಿ ಸ್ಥಳವನ್ನು ನಿಗದಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?